ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

24

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE : 27/1/21

# ಸಚಿವ ಅಶೋಕ್ ಪಿಎ ವಿರುದ್ಧ ಲಂಚ ಕೇಳಿದ ಆರೋಪ; ದೂರು ದಾಖಲು

ಚಿಕ್ಕಮಗಳೂರು: ಕಂದಾಯ ಸಚಿವ ಆರ್. ಅಶೋಕ್ ಜಿಲ್ಲೆಗೆ ಭೇಟಿ ನೀಡಿದ ವೇಳೆ ಅವರ ಆಪ್ತ ಸಹಾಯಕ ಶೃಂಗೇರಿ ತಾಲೂಕಿನ ಸಬ್ ರಿಜಿಸ್ಟ್ರಾರ್ ಬಳಿ ಲಂಚ ಕೇಳಿದ ಆರೋಪ ಕೇಳಿಬಂದಿದ್ದು, ಈ ಕುರಿತು ಸಬ್ ರಿಜಿಸ್ಟ್ರಾರ್ ಇಲಾಖೆ ಅಧಿಕಾರಿ ಶೃಂಗೇರಿ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ.

ಜ.24ರಂದು ಜಿಲ್ಲೆಗೆ ಭೇಟಿ ನೀಡಿದ್ದ ಸಚಿವ ಆರ್.ಅಶೋಕ್ ಅವರು ಅಂದು ಸಂಜೆ ಶೃಂಗೇರಿಗೆ ಭೇಟಿ ನೀಡಿದ್ದರು. ಈ ಸಂದರ್ಭದಲ್ಲಿ ಸಚಿವರ ಆಪ್ತ ಸಹಾಯಕ ಶೃಂಗೇರಿ ಸಬ್ ರಿಜಿಸ್ಟ್ರಾರ್ ಚೆಲುವರಾಜ್ ಅವರಿಗೆ ಕರೆ ಮಾಡಿ ಸಚಿವರು ತಮ್ಮನ್ನು ಭೇಟಿಯಾಗಲು ಹೇಳಿದ್ದಾರೆ ಎಂದು ತಿಳಿಸಿದ್ದಾರೆ.

7:30ರ ಸುಮಾರಿಗೆ ಸಚಿವರು ಶೃಂಗೇರಿ ಆದಿಚುಂಚನಗಿರಿ ಸಭಾ ಭವನಕ್ಕೆ ಆಗಮಿಸಿದ ವೇಳೆ ಸಬ್ ರಿಜಿಸ್ಟ್ರಾರ್ ಚೆಲುವರಾಜ್ ಅವರು ಸಚಿವರ ಆಪ್ತ ಸಹಾಯಕ ಗಂಗಾಧರ್ ಅವರನ್ನು ಸಭಾಭವನದಲ್ಲಿ ಭೇಟಿ ಮಾಡಿದ್ದಾರೆ. ಈ ಸಂದರ್ಭದಲ್ಲಿ ಸಚಿವರ ಆಪ್ತ ಸಹಾಯಕ, 'ಏನಿದೆ ಕೊಡಿ' ಎಂದು ಚೆಲುವರಾಜ್ ಬಳಿ ಲಂಚ ಕೇಳಿದರು ಎಂದು ಆರೋಪಿಸಲಾಗಿದೆ.

**ಸಚಿವರ ಪಿಎ-ಸಬ್ ರಿಜಿಸ್ಟ್ರಾರ್ ಮಧ್ಯೆ ನಡೆದ ಸಂಭಾಷಣೆ ಆಡಿಯೋ ವೈರಲ್**

ಇದಕ್ಕೆ ಪ್ರತಿಕ್ರಿಯಿಸಿದ ಚೆಲುವರಾಜ್, 'ನಾನು ಕೊಡೋದು ಇಲ್ಲ, ತೆಗೆದುಕೊಳ್ಳುವುದೂ ಇಲ್ಲ' ಎಂದು ಹೇಳಿದ್ದಾರೆ. ಆಗ ಅವರ ಕೈಯಲ್ಲಿದ್ದ ಪತ್ರವನ್ನು ನೋಡಿ ಗಂಗಾಧರ್, ಏನಿದು ಎಂದು ಕೇಳಿದ್ದಾರೆ? 'ದೂರೊಂದನ್ನು ಬರೆದಿದ್ದೇನೆ.. ಅದನ್ನು ಸಚಿವರಿಗೆ ಕೊಡಿ' ಎಂದು ಹೇಳಿ ದೂರಿನ ಪ್ರತಿಯನ್ನು ಗಂಗಾಧರ್ ಅವರಿಗೆ ನೀಡಲು ಮುಂದಾಗಿದ್ದಾರೆ. ಆದರೆ ಆಪ್ತ ಸಹಾಯಕ 'ಅದನ್ನು ನೀವೇ ಕೊಟ್ಟುಕೊಳ್ಳಿ' ಎಂದು ಅಲ್ಲಿಂದ ಎದ್ದು ಹೋದರು ಎಂದು ಚೆಲುವರಾಜ್ ತಿಳಿಸಿದ್ದಾರೆ.

ಅಂದು ರಾತ್ರಿ ಗಂಗಾಧರ್ ಚೆಲುವರಾಜ್‌ಗೆ ವಾಟ್ಸ್ಆ್ಯಪ್‌ನಲ್ಲಿ ಕರೆ ಮಾಡಿ ನೀವು ಫೈಲ್ ಕೊಡಲಿಲ್ಲ ಎಂದು ಕೇಳಿದ್ದಾರೆ. 'ನನ್ನ ಬಳಿ ಯಾವ ಫೈಲ್ ಇಲ್ಲ, ನೀವು ಲಂಚ ಕೇಳಿದ್ದೀರಿ ನಾನು ಕೊಡಲಿಲ್ಲ.' ಈ ಕುರಿತು ಪೊಲೀಸರಿಗೆ ದೂರು ನೀಡುತ್ತೇನೆಂದು ಸಬ್‌ರಜಿಸ್ಟ್ರಾರ್ ಹೇಳಿದ್ದಾರೆ. ಈ ಸಂಭಾಷಣೆ ಆಡಿಯೋ ಈಗ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದೆ. ಚೆಲುವರಾಜ್ ಅವರು ಸಚಿವರ ಆಪ್ತ ಕಾರ್ಯದರ್ಶಿ ಗಂಗಾಧರ್ ವಿರುದ್ಧ ಲಂಚಕ್ಕೆ ಬೇಡಿಕೆ ಇಟ್ಟ ಸಂಬಂಧ ಮಂಗಳವಾರ ಶೃಂಗೇರಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ.

## ಮಾತೃ ಇಲಾಖೆಗೆ ಕಳುಹಿಸಲು ತೀರ್ಮಾನ

ಬೆಂಗಳೂರು: ಕಂದಾಯ ಸಚಿವ ಆರ್. ಅಶೋಕ್ ತಮ್ಮ ಆಪ್ತ ಸಹಾಯಕ ಗಂಗಾಧರ ಅವರನ್ನು ಮಾತೃ ಇಲಾಖೆಗೆ ವಾಪಸ್ ಕಳುಹಿಸಲು ತೀರ್ಮಾನಿಸಿದ್ದಾರೆ. ಲಂಚಕ್ಕಾಗಿ ಬೇಡಿಕೆ ಇಟ್ಟಿದ್ದಾರೆ ಎಂಬ ಆರೋಪದ ಹಿನ್ನೆಲೆಯಲ್ಲಿ ಸಚಿವರ ಆಪ್ತ ಸಹಾಯಕ ಗಂಗಾಧರ ವಿರುದ್ಧ ದೂರು ದಾಖಲಾಗಿರುವುದರಿಂದ ಅವರ ವಿರುದ್ಧದ ತನಿಖೆ ಮುಗಿಯುವವರೆಗೂ ಅವರನ್ನು ಮಾತೃ ಇಲಾಖೆ ವಿಧಾನಸಭೆ ಸಚಿವಾಲಯಕ್ಕೆ ಕಳುಹಿಸಲು ನಿರ್ಧರಿಸಿದ್ದಾರೆ ಎಂದು ತಿಳಿದು ಬಂದಿದೆ. ಈ ನಡುವೆ ತಮ್ಮ ವಿರುದ್ಧ ಆಧಾರ ರಹಿತ ಆರೋಪ ಮಾಡಿದ್ದಾರೆ ಎಂದು ಆರೋಪಿಸಿ ಗಂಗಾಧರ ಶೃಂಗೇರಿ ಸಬ್ ರಿಜಿಸ್ಟ್ರಾರ್ ವಿರುದ್ಧ ಮಾನನಷ್ಟ ಮೊಕದ್ದಮೆ ಹೂಡಲು ಮುಂದಾಗಿದ್ದಾರೆಂದು ತಿಳಿದು ಬಂದಿದೆ.